**All India Radio: Bangalore**
**National Bulletin In Kannada**
**13.02.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**13.02.2025 13.10 p.m.**
**<><><><>**

ಮುಖ್ಯಾಂಶಗಳು

1. ಸಂಸತ್‌ನಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಕುರಿತು ಗದ್ದಲ; ಕಲಾಪ ಮುಂದೂಡಿಕೆ
2. ಅಮೆರಿಕ ಪ್ರವಾಸದಲ್ಲಿ ಪ್ರಧಾನಿ ನರೇಂದ್ರ ಮೋದಿ : ಇಂದು ಹಲವು ಗಣ್ಯರೊಂದಿಗೆ ದ್ವಿಪಕ್ಷೀಯ ಸಮಾಲೋಚನೆ
3. ಮೆಟ್ರೋ ರೈಲು ಪ್ರಯಾಣ ದರ ಇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
4. ಇಂದು ವಿಶ್ವ ರೇಡಿಯೋ ದಿನ; ಬಾನುಲಿ ಮಹತ್ವ ಕುರಿತು ಜನ ಜಾಗೃತಿ
5. ೩೮ನೇ ರಾಷ್ಟ್ರೀಯ ಕ್ರೀಡಾಕೂಟ : ಪದಕ ಪಟ್ಟಿಯಲ್ಲಿ ಸರ್ವೀಸ್ ಸ್ಪೋರ್ಟ್ಸ್ ಕಂಟ್ರೋಲ್ ಬೋರ್ಡ್ ಅಗ್ರಸ್ಥಾನದಲ್ಲಿ

<><><><>

ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ ೨೦೨೪ ಕುರಿತ ಜಂಟಿ ಪರಿಶೀಲನಾ ಸಮಿತಿಯ ವರದಿ ಹಿನ್ನೆಲೆಯಲ್ಲಿ ಲೋಕಸಭೆ ಕಲಾಪವನ್ನು ಮಧ್ಯಾಹ್ನ ೨ ಗಂಟೆವರೆಗೆ ಮುಂದೂಡಲಾಗಿದೆ. ಈ ಕುರಿತಾದ ವರದಿಯನ್ನು ಇಂದು ಲೋಕಸಭೆಯಲ್ಲಿ ಮಂಡಿಸುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಪ್ರತಿಪಕ್ಷಗಳಾದ ಕಾಂಗ್ರೆಸ್, ಡಿಎಂಕೆ ಮತ್ತು ಸಮಾಜವಾದಿ ಪಕ್ಷದ ಸದಸ್ಯರು ಗದ್ದಲ ಎಬ್ಬಿಸಿದರು. ಸ್ಪೀಕರ್ ಓಂಬಿರ್ಲಾ ಮಾಡಿದ ಮನವಿಗೆ ವಿಪಕ್ಷ ಸದಸ್ಯರು ಕಿವಿಗೊಡಲಿಲ್ಲ. ಸದನದಲ್ಲಿ ವರದಿ ಮಂಡಿಸಿದ ನಂತರ ಚರ್ಚೆಗೆ ಅವಕಾಶ ಕಲ್ಪಿಸುವುದಾಗಿ ಸಭಾಧ್ಯಕ್ಷರು ಮನವಿ ಮಾಡಿದ್ದಾರೆ. ಪ್ರಶ್ನೋತ್ತರ ಕಲಾಪ ಅತ್ಯಂತ ಪ್ರಮುಖವಾಗಿದ್ದು, ಜ್ವಲಂತ ಸಮಸ್ಯೆಗಳಿಗೆ ಸದನದಲ್ಲಿ ಉತ್ತರ ನೀಡಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು. ಗದ್ದಲ ಮುಂದುವರೆದಾಗ ಕಲಾಪವನ್ನು ಮಧ್ಯಾಹ್ನ ೨ವರೆಗೆ ಮುಂಡೂಡಿದರು. ಈ ಮಧ್ಯೆ ರಾಜ್ಯಸಭೆಯಲ್ಲಿ ಇದೇ ವಿಷಯದ ಬಗ್ಗೆ ಗದ್ದಲದ ವಾತಾವರಣ ನಿರ್ಮಾಣವಾಯಿತು. ಬಿಜೆಪಿ ಸಂಸದ ಡಾ. ಮೇಧ ವಿಶ್ರಾಮ್ ಕುಲಕರ್ಣಿ, ವಕ್ಫ್

ತಿದ್ದುಪಡಿ ಮಸೂದೆ ಕುರಿತ ವರದಿಯನ್ನು ಮಂಡಿಸಿದರು. ಇದಾದ ನಂತರ ಸಭಾಪತಿ ಜಗದೀಪ್ ಧನ್‌ಕರ್, ಕಲಾಪವನ್ನು ಸ್ವಲ್ಪ ಕಾಲ ಮುಂದೂಡಿದರು.

<><><>

ಪ್ರಧಾನಿ ನರೇಂದ್ರ ಮೋದಿ ಯಶಸ್ವಿಯಾಗಿ ಫ್ರಾನ್ಸ್ ಪ್ರವಾಸ ಪೂರ್ಣಗೊಳಿಸಿದ್ದು, ಅಮೆರಿಕದ ವಾಷಿಂಗ್‌ಟನ್ ಡಿಸಿ ತಲುಪಿದ್ದಾರೆ. ವಾಷಿಂಗ್‌ಟನ್ ಡಿಸಿಯಲ್ಲಿ ಪ್ರಧಾನಿಯವರಿಗೆ ಭವ್ಯ ಸ್ವಾಗತ ನೀಡಲಾಯಿತು. ನಂತರ ಅವರು, ವಾಷಿಂಗ್‌ಟನ್ ಡಿಸಿಯ ಬ್ಲೇರ್ ಹೌಸ್‌ಗೆ ತೆರಳಿದರು. ಇದೇ ಸಂದರ್ಭದಲ್ಲಿ ಅವರು, ಅಮೆರಿಕದ ರಾಷ್ಟ್ರೀಯ ಗುಪ್ತದಳದ ನಿರ್ದೇಶಕರಾದ ತುಳ್ಸಿ ಗಬ್ಬಾರ್ಡ್ ಅವರನ್ನು ಭೇಟಿ ಮಾಡಿದರು. ಭೇಟಿಯ ಸಮಯದಲ್ಲಿ, ಪ್ರಧಾನ ಮಂತ್ರಿಯವರು ತುಳ್ಸಿ ಗಬ್ಬಾರ್ಡ್ ಅವರೊಂದಿಗಿನ ತಮ್ಮ ಹಿಂದಿನ ಸಂವಾದಗಳನ್ನು ಪ್ರೀತಿಯಿಂದ ನೆನಪಿಸಿಕೊಂಡರು. ದ್ವಿಪಕ್ಷೀಯ ಗುಪ್ತಚರ ಸಹಕಾರವನ್ನು ಹೆಚ್ಚಿಸುವ ಬಗ್ಗೆ, ವಿಶೇಷವಾಗಿ ಭಯೋತ್ಪಾದನೆ ನಿಗ್ರಹ, ಸೈಬರ್ ಭದ್ರತೆ, ಬೆದರಿಕೆಗಳು ಮತ್ತು ಕಾರ್ಯತಂತ್ರದ ಗುಪ್ತಚರ ಹಂಚಿಕೆಯ ಬಗ್ಗೆ ಚರ್ಚಿಸಿದವು. ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಅವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು, ಸುರಕ್ಷಿತ, ಸ್ಥಿರ ಮತ್ತು ನಿಯಮ ಆಧಾರಿತ ಅಂತರರಾಷ್ಟ್ರೀಯ ಕ್ರಮಕ್ಕೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಇಂದು ಪ್ರಧಾನಿಯವರು, ಉದ್ಯಮಿ ಎಲಾನ್ ಮಸ್ಕ್ ಅವರನ್ನು ಶ್ವೇತಭವನದಲ್ಲಿ ಭೇಟಿಯಾಗಲಿದ್ದಾರೆ. ಪ್ರಧಾನಿ ಮೋದಿ ಅವರ ಭೇಟಿಯ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, 'ಅಮೆರಿಕಾ ಅಧ್ಯಕ್ಷರ ಪದಗ್ರಹಣದ ನಂತರ ಅಮೆರಿಕಕ್ಕೆ ಭೇಟಿ ನೀಡಿರುವ ಮೊದಲ ಕೆಲವು ವಿಶ್ವ ನಾಯಕರಲ್ಲಿ ಪ್ರಧಾನಿ ನರೇಂದ್ರ ಮೋದಿ ಕೂಡ ಒಬ್ಬರು" ಎಂದು ಹೇಳಿದರು. ವಾಷಿಂಗ್ಟನ್ ಡಿಸಿಯಲ್ಲಿ, ಪ್ರಧಾನಿ ಮೋದಿ ಅವರು ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರೊಂದಿಗೆ ನಿಯೋಗ ಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಅಮೆರಿಕದ ಹಿರಿಯ ಆಡಳಿತ ವ್ಯಕ್ತಿಗಳು, ವ್ಯಾಪಾರ ಮುಖಂಡರು ಮತ್ತು ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ.

<><><>

ಜನಪದ ಹಾಡುಗಳನ್ನು ಹಾಡುವ ಜೊತೆಗೆ ಮದ್ಯಪಾನ ವಿರೋಧಿ ಹೋರಾಟದಿಂದ ಖ್ಯಾತಿಗಳಿಸಿದ್ದ ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಬಡಗೇರಿಯ ಸುಕ್ರಿ ಬೊಮ್ಮ ಗೌಡ ಇಂದು ತಮ್ಮ ಸ್ವಗೃಹದಲ್ಲಿ ನಿಧನರಾದರು. ೮೮ ವರ್ಷ ವಯಸ್ಸಿನ ಸುಕ್ರಿ ಬೊಮ್ಮಗೌಡ ಕಳೆದ ಕೆಲವು

ತಿಂಗಳುಗಳಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದರು. ಮೂರು ದಿನಗಳ ಹಿಂದಷ್ಟೇ ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗಿತ್ತು. ಮನೆಗೆ ಮರಳಿದ್ದ ಅವರು ಚೇತರಿಸಿಕೊಂಡಿದ್ದರು. ೧೯೯೯ರಲ್ಲಿ ಜನಪದಶ್ರೀ ಪ್ರಶಸ್ತಿ, ೨೦೦೬ರಲ್ಲಿ ನಾಡೋಜ ಪ್ರಶಸ್ತಿ, ೨೦೧೭ರಲ್ಲಿ ಪದ್ಮಶ್ರೀ ಪ್ರಶಸ್ತಿಗೆ ಅವರು ಭಾಜನರಾಗಿದ್ದರು. ಸುಕ್ರಜ್ಜಿ ಎಂದೇ ಖ್ಯಾತರಾಗಿದ್ದ ಅವರು ಹಾಲಕ್ಕಿ ಜನಪದ ಹಾಡುಗಳನ್ನು ಹಾಡುವ ಮೂಲಕ ಚಿರಪರಿಚಿತರಾಗಿದ್ದರು. ತಮ್ಮ ಗ್ರಾಮ ಬಡಗೇರಿಯಲ್ಲಿ ಮದ್ಯ ಮಾರಾಟ ಹಾವಳಿ ಹೆಚ್ಚಿದ್ದರಿಂದ ಅದನ್ನು ತಡೆಯಲು ಹಲವು ದಶಕಗಳ ಹಿಂದೆ ಸುಕ್ರಜ್ಜಿ ಜನಾಂದೋಲನ ನಡೆಸಿದ್ದರು. ಸುಕ್ರಿ ಬೊಮ್ಮಗೌಡ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದು, ಹಾಲಕ್ಕಿ ಜಾನಪದ ಹಾಡುಗಳ ಮೂಲಕ ಲೋಕ ಪ್ರಸಿದ್ಧರಾಗಿದ್ದ ಅವರ ಸಾಧನೆ ಆದರ್ಶಪ್ರಾಯವಾದದ್ದು ಎಂದು ಹೇಳಿದ್ದಾರೆ. ಸುಕ್ರಿ ಬೊಮ್ಮ ಗೌಡ ನಿಧನಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರ ಸ್ವಾಮಿ ಕಂಬನಿ ಮಿಡಿದಿದ್ದಾರೆ.

<><><><>

ಬೆಂಗಳೂರು ಮೆಟ್ರೋ ರೈಲು ನಿಗಮ ಇತ್ತೀಚೆಗೆ ಪ್ರಯಾಣ ದರ ಏರಿಕೆ ಹಲವು ರೀತಿಯ ವೈಪರೀತ್ಯಗಳಿಂದ ಕೂಡಿದ್ದು, ಕೆಲವು ಕಡೆಗಳಲ್ಲಿ ಪ್ರಯಾಣ ದರ ದುಪ್ಪಟ್ಟಾಗಿದೆ. ಇದರ ವಿರುದ್ಧ ವ್ಯಕ್ತವಾದ ಸಾರ್ವಜನಿಕರ ವಿರೋಧವನ್ನು ಪರಿಗಣಿಸಿ ಎಲ್ಲೆಲ್ಲಿ ಅಸಹಜ ರೀತಿಯಲ್ಲಿ ದರ ಏರಿಕೆಯಾಗಿದೆಯೋ ಅಂತಹ ಕಡೆಗಳಲ್ಲಿ ಪ್ರಯಾಣ ದರ ಇಳಿಸುವಂತೆ ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮೆಟ್ರೊ ರೈಲು ವ್ಯವಸ್ಥೆ ದೊಡ್ಡ ಪ್ರಮಾಣದಲ್ಲಿ ಬಂಡವಾಳ ಹೂಡಿಕೆ ಮಾಡಬೇಕಾಗಿದೆ. ಇದು ಸಾರ್ವಜನಿಕ ಸಾರಿಗೆ ವ್ಯವಸ್ಥೆಯಾಗಿರುವ ಕಾರಣ ಪ್ರಯಾಣ ದರ ಪರಿಷ್ಕರಣೆ ಅನಿವಾರ್ಯವಾಗಿತ್ತು ಎನ್ನುವುದು ನಿಜ. ಆದರೂ ಅಂತಿಮವಾಗಿ ಪ್ರಯಾಣಿಕರ ಹಿತರಕ್ಷಣೆ ಮಾಡಬೇಕಾಗಿರುವುದು ನಮ್ಮ ಕರ್ತವ್ಯ ಎಂಬ ವಿಚಾರವನ ನು ಬಿಎಂಆರ್‌ಸಿಎಲ್ ಗಮನಕ್ಕೆ ತಂದಿರುವುದಾಗಿ ತಿಳಿಸಿದ್ದಾರೆ.

<><><><>

ಇಂದು ವಿಶ್ವ ರೇಡಿಯೋ ದಿನ. ಪ್ರತಿ ವರ್ಷ ಫೆಬ್ರವರಿ ೧೩ ರಂದು, ವಿಶ್ವ ರೇಡಿಯೊದಿನ ಆಚರಿಸಲಾಗುತ್ತದೆ. ರೇಡಿಯೋ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ರೇಡಿಯೊ ಮಾಹಿತಿ, ಮನೋರಂಜನೆ ಮತ್ತು ಶಿಕ್ಷಣ ನೀಡುವ ಪ್ರಮುಖ ಮಾಧ್ಯಮವಾಗಿದೆ. ರೇಡಿಯೊ ಜನರ

ಜೀವನವನ್ನು ಸ್ಪರ್ಶಿಸುವ ಮತ್ತು ಜಗತ್ತಿನ ಮೂಲೆ ಮೂಲೆಯಿಂದ ಶೋತೃಗಳನ್ನು ಒಟ್ಟುಗೂಡಿಸುವ ವಿಶಿಷ್ಟ ಶಕ್ತಿ ಹೊಂದಿದೆ. ಈ ವರ್ಷದ ವಿಶ್ವ ರೇಡಿಯೋ ದಿನದ ವಿಷಯ - ರೇಡಿಯೋ ಮತ್ತು ಹವಾಮಾನ ಬದಲಾವಣೆ ಎಂಬುದಾಗಿದೆ. ವಿಶ್ವ ರೇಡಿಯೋ ದಿನದ ಸಂದೇಶದಲ್ಲಿ, ಯುನೆಸ್ಕೋದ ಮಹಾನಿರ್ದೇಶಕಿ ಆಡ್ರೆ ಅಜೌಲೆ, ವಿಶ್ವ ರೇಡಿಯೋ ದಿನವು ಶಾಶ್ವತ, ಬಹುಮುಖ ಮತ್ತು ವ್ಯಾಪಕವಾಗಿ ಹರಡಿರುವ ಸಂವಹನ ಸಾಧನವನ್ನು ಆಚರಿಸಲು ಒಂದು ಅವಕಾಶವಾಗಿದೆ. ವೇಗವಾಗಿ ಬದಲಾಗುತ್ತಿರುವ ಜಗತ್ತಿನಲ್ಲಿ ಹವಾಮಾನ ವೈಪರೀತ್ಯದ ಪರಿಣಾಮಗಳಿಗೆ ಹೊಂದಿಕೊಳ್ಳಲು ಮತ್ತು ಇವುಗಳ ಪರಿಣಾಮ ತಗ್ಗಿಸಲು ರೇಡಿಯೋ ಒಂದು ಸಾಧನವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದ್ದಾರೆ. ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್, ಸುದ್ದಿ ಮತ್ತು ಮಾಹಿತಿಯ ಪ್ರಸರಣದ ಮೂಲಕ, ರಾಷ್ಟ್ರದ ಸಾಂಸ್ಕೃತಿಕ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ರೇಡಿಯೋ ಪ್ರಮುಖ ಪಾತ್ರ ವಹಿಸುತ್ತದೆ. 'ಬಹುಜನ ಹಿತಾಯ ಬಹುಜನ ಸುಖಾಯ" ಎಂಬ ಧ್ಯೇಯವಾಕ್ಯದೊಂದಿಗೆ, ವಿಶ್ವದ ಅತಿದೊಡ್ಡ ರೇಡಿಯೋ ಜಾಲವಾದ ಆಕಾಶವಾಣಿ ದೇಶದ ಜನರ ಮನಸ್ಸನ್ನು ತಲುಪುತ್ತಿದೆ ಎಂದು ಅವರು ಹೇಳಿದರು.

ಧ್ವನಿ : ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ (೩೦ ಸೆಕೆಂಡ್ಸ್)

ಪ್ರಸಾರ ಭಾರತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ ತಮ್ಮ ಸಂದೇಶದಲ್ಲಿ, ಆಕಾಶವಾಣಿ ಭಾರತದ ಶ್ರೀಮಂತ ಸಂಸ್ಕೃತಿ ಮತ್ತು ಸಂಪ್ರದಾಯಗಳ ವಾಹಕವಾಗಿದೆ. ಇದು ಭಾರತದ ವೈಜ್ಞಾನಿಕ ಪ್ರಗತಿಯ ಪ್ರಯಾಣದೊಂದಿಗೆ ಜನರನ್ನು ಸಂಪರ್ಕಿಸುತ್ತಿದೆ ಎಂದು ಹೇಳಿದರು.

ಧ್ವನಿ : ಪ್ರಸಾರ ಭಾರತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ (೨೨ ಸೆಕೆಂಡ್ಸ್)

ವಿಶ್ವ ರೇಡಿಯೋ ದಿನದಂದು ಶುಭಾಶಯಗಳನ್ನು ತಿಳಿಸಿದ ಆಕಾಶವಾಣಿಯ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಲಿವಾಲ್ ಗೌರ್, ಸುಮಾರು ಒಂಭತ್ತು ದಶಕಗಳಿಂದ ಆಕಾಶವಾಣಿ - ಮಾಹಿತಿ, ಶಿಕ್ಷಣ ಮತ್ತು ಮನರಂಜನೆಯೊಂದಿಗೆ ಕೇಳುಗರನ್ನು ಮನವನ್ನು ತಲುಪುತ್ತಿದೆ ಎಂದು ಹೇಳಿದರು.

<><><><>

ಉತ್ತರಾಖಂಡ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಸರ್ವಿಸ್ ಸ್ಪೋರ್ಟ್ಸ್ ಕಂಟ್ರೋಲ್ ಬೋರ್ಡ್ ೬೫ ಸ್ವರ್ಣ ಪದಕಗಳೊಂದಿಗೆ ಅಗ್ರಸ್ಥಾನದಲ್ಲಿದೆ. ಮಹಾರಾಷ್ಟ್ರ ೫೦ ಹಾಗೂ

ಹರಿಯಾಣ ೩೯ ಚಿನ್ನದ ಪದಕಗಳೊಂದಿಗೆ ೨ ಹಾಗೂ ೩ನೇ ಸ್ಥಾನದಲ್ಲಿವೆ. ಇಂದು ಪುರುಷರ ಹಾಕಿಯಲ್ಲಿ ಮಧ್ಯಪ್ರದೇಶ-ಹರಿಯಾಣ, ಮಹಾರಾಷ್ಟ್ರ-ಉತ್ತರಪ್ರದೇಶ ತಂಡಗಳು ಮುಖಾಮುಖಿಯಾಗಲಿವೆ. ಉತ್ತರಾಖಂಡದ ಉದಮ್‌ಸಿಂಗ್ ನಗರದಲ್ಲಿ ಮಲ್ಲಕಂಬ ಸ್ಪರ್ಧೆಗಳು ನಡೆಯಲಿವೆ. ಮಧ್ಯಪ್ರದೇಶ-ಮಹಾರಾಷ್ಟ್ರ ಮತ್ತು ತಮಿಳುನಾಡು ತಂಡಗಳು ಪದಕಕ್ಕಾಗಿ ಸೆಣಸಲಿವೆ. ಮಹಿಳಾ ವಿಭಾಗದಲ್ಲಿ ಮಧ್ಯಪ್ರದೇಶ ಈಗಾಗಲೇ ಚಿನ್ನದ ಪದಕ ತನ್ನದಾಗಿಸಿಕೊಂಡಿದೆ. ಪುರುಷರ ಜಾವಲಿನ್ ಥ್ರೋನಲ್ಲಿ ಉತ್ತರಪ್ರದೇಶದ ಸಚಿನ್ ಯಾದವ್ ೮೪.೩೯ ಮೀಟರ್ ಜಾವಲಿನ್ ಎಸೆದು ೧೦ ವರ್ಷಗಳ ದಾಖಲೆಯನ್ನು ಮುರಿದಿದ್ದಾರೆ.

<><><><>

ರಕ್ಷಣಾ ಉತ್ಪನ್ನಗಳನ್ನು ದೇಶೀಯವಾಗಿ ಉತ್ಪಾದನೆ ಮಾಡುತ್ತಿದ್ದು, ಭಾರತ ಹೊಸ ಮೈಲಿಗಲ್ಲನ್ನೇ ಸೃಷ್ಟಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಬೆಂಗಳೂರಿನ ಯಲಹಂಕದ ವಾಯು ನೆಲೆಯಲ್ಲಿ ಆಯೋಜಿಸಿರುವ ಏರೋ ಇಂಡಿಯಾ - ೨೦೨೫ರ ಸಮಾರಂಭದಲ್ಲಿ ನಿನ್ನೆ ಮಾತನಾಡಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>